ಸಂಯುಕ್ತ ಕರ್ನಾಟಕ ಹಾವೇರಿ

ಜಿಲ್ಲಾ ಮಟ್ಟದ ಪ್ರೌಢಶಾಲಾ ಸಹ-ಶಿಕ್ಷಕರ ಶೈಕ್ಷಣಿಕ ಸಮ್ಮೇಳನ । ಬಸವರಾಜ ಹೊರಟ್ಟಿ ಅಭಿಮತ

# ಸಂಘಟಿತ ಹೋರಾಟಕ್ಕೆ ಜಯ ಖಚಿತ

ಹಾವೇರಿ: 'ಯಾರೇ ಆಗಲಿ ತಮ್ಮ ಹಕ್ಕುಗಳನ್ನು ಕೇಳುವಾಗ ಒಬ್ಬಂಟಿಯಾಗಿ ಹೋದರೆ ಜಯ ಸಿಗುವುದಿಲ್ಲ. ಸಂಘಟಿತರಾಗಿ, ಸಂಘಟನೆ ಮೂಲಕವಾಗಿ ತಮ್ಮ ಹಕ್ಕುಗಳನ್ನು ನ್ಯಾಯಯುತವಾಗಿ ಕೇಳಿದಾಗ ಜಯ ಸಿಗುತ್ತದೆ' ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ನಗರದ ಜಿಲ್ಲಾ ಗುರುಭವನದಲ್ಲಿ ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ-ಶಿಕ್ಷಕರ ಸಂಘದ ಜಿಲ್ಲಾ ಘಟಕದ ಆಶ್ರಯದಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಪ್ರೌಢಶಾಲಾ ಸಹ-ಶಿಕ್ಷಕರ ಶೈಕ್ಷಣಿಕ ಸಮ್ಮೇಳನ, ಸರ್ವೋದಯ ದಿನಾಚರಣೆ ಹಾಗೂ ಎಸ್ಸೆಸ್ಸೆಲ್ಸಿ ಫಲಿತಾಂಶ ಸುಧಾರಣೆಯ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಷ್ಟ್ರದ ಭವಿಷ್ಯವನ್ನು ನಿರ್ಮಿಸುವ ಶಿಕ್ಷಕರು ಆಧುನಿಕ ಶೈಕ್ಷಣಿಕ ವ್ಯವಸ್ಥೆಯಲ್ಲಿ ಅನೇಕ ಸವಾಲುಗಳನ್ನು ಎದುರಿಸುತ್ತಿದ್ದಾರೆ. ಅವುಗಳಿಗೆ ಪರಿಹಾರ ಕಂಡುಕೊಳ್ಳಲು ಈ ರೀತಿ ಸಂಘಟಿತರಾಗಿ ಶೈಕ್ಷಣಿಕ ಪ್ರಗತಿ ಮತ್ತು ಇಲಾಖೆಯ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಶಾಂತಗಿರಿ ಮಾತನಾಡಿ, ಸಹ ಶಿಕ್ಷಕರಿಗೆ ಇಲಾಖೆಯಿಂದ ಸಿಗಬೇಕಾಗಿರುವ ಎಲ್ಲ ಸೌಲಭ್ಯಗಳನ್ನು ಕೊಡಿಸುವ ಮತ್ತು ಅವರ ಬೋಧನಾ ಶೈಲಿಯಲ್ಲಿ ಉತ್ಸಾಹ ತುಂಬುವ ಜವಾಬ್ದಾರಿ ನಮ್ಮ ಸಂಘಟನೆ ಮೇಲಿದೆ. ಏಳನೇ ವೇತನ ಆಯೋಗದ ಜಾರಿ ಮತ್ತು ಸರ್ಕಾರಿ ನೌಕರರಿಗೆ ಹಳೆಯ ಪಿಂಚಣಿ ವ್ಯವಸ್ಥೆ ಮರುಜಾರಿ, ಪದವಿ ಪೂರ್ವ ಕಾಲೇಜಿಗೆ ಬಡ್ತಿ ನೀಡುವುದು, ಹೊಸ ಪ್ರೌಢಶಾಲೆಗಳಿಗೆ ಮತ್ತು ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗಕ್ಕೆ ಮುಖ್ಯೋಪಾಧ್ಯಾಯರ ಹುದ್ದೆ ಮಂಜೂರು ಮಾಡುವುದು ಇನ್ನೂ ಮುಂತಾದ ಅನೇಕ ನಮ್ಮ ಬೇಡಿಕೆಗಳೊಂದಿಗೆ ಸರ್ಕಾರಕ್ಕೆ ಮನವಿ ಸಲ್ಲಿಸಿ ಹೋರಾಟ ಮಾಡೋಣ ಎಂದು ಕರೆ ನೀಡಿದರು.



ಹಾವೇರಿ ನಗರದ ಜಿಲ್ಲಾ ಗುರುಭವನದಲ್ಲಿ ರಾಜ್ಯ ಪ್ರೌಢಶಾಲಾ ಸಹ-ಶಿಕ್ಷಕರ ಸಂಘದ ಜಿಲ್ಲಾ ಘಟಕದ ಆಶ್ರಯದಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಪ್ರೌಢಶಾಲಾ ಸಹ-ಶಿಕ್ಷಕರ ಶೈಕ್ಷಣಿಕ ಸಮ್ಮೇಳನವನ್ನು ವಿಪ ಸಭಾಪತಿ ಬಸವರಾಜ ಹೊರಟ್ಟಿ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಧಾರವಾಡದ ಹಿರೇಮಲ್ಲೂರು ಈಶ್ವರನ್ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದ ಶಶಿಧರ ತೋಡ್ಕರ ಉಪನ್ಯಾಸ ನೀಡಿದರು. ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಹಿರಿಯ ಸಾಹಿತಿ ಸತೀಶ ಕುಲಕರ್ಣಿ ಹಾಗೂ ಡಾ. ಶಂಭು ಬಳಿಗಾರ ಅವರನ್ನು ಸನ್ಮಾನಿಸಲಾಯಿತು. ಬಡ್ತಿ ಮುಖ್ಯೋಪಾಧ್ಯಾಯರನ್ನು, ಸಂಘಟನೆಯ ಪದಾಧಿಕಾರಿಗಳನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಡಿಡಿಪಿಐ ಸುರೇಶ ಹುಗ್ಗಿ, ಡಯಟ್ ಪ್ರಾಚಾರ್ಯ ಗಿರೀಶ ಪದಕಿ, ಜಿಲ್ಲೆಯ ವಿವಿಧ ತಾಲೂಕಿನ ಕ್ಷೇತ್ರಶಿಕ್ಷಣಾಧಿಕಾರಿಗಳಾದ ಮೌನೇಶ ಬಡಿಗೇರ, ಎಂ.ಎಚ್.ಪಾಟೀಲ, ಶ್ರೀಧರ, ಎಸ್.ಜಿ.ಕೋಟಿ, ಎಂ.ಎಫ್.ಬಾರ್ಕಿ, ನಿರಂಜನ ಮೂರ್ತಿ, ವಿಷಯ ಪರೀವೀಕ್ಷಕರು, ಪ್ರೌಢಶಾಲಾ ಸಹಶಿಕ್ಷಕರ ಸಂಘದ ರಾಜ್ಯಾಧ್ಯಕ್ಷ ಸಿದ್ಧಬಸಪ್ಪ ಬಿ, ಗೌರವಾಧ್ಯಕ್ಷ ಎಚ್.ಕೆ ಮಂಜುನಾಥ, ಪ್ರಧಾನ ಕಾರ್ಯದರ್ಶಿ ರಾಮು ಗುಗವಾಡ,

> ಶಾಲೆ ಎಂಬ ನಾಲ್ಕು ಗೋಡೆಗಳ ಮಧ್ಯದಲ್ಲಿ ದೇಶದ ಭವಿಷ್ಯವನ್ನು ನಿರ್ಮಿಸುವ ಕೆಲಸವನ್ನು ಶಿಕ್ಷಕರು ಮಾಡುತ್ತಿದ್ದು, ಅವರ ಸೇವೆ ಸದಾ ಸ್ಮರಣೀಯ. ವಿಶೇಷವಾಗಿ ಎಸ್ಸೆಸ್ಸೆಲ್ಸಿ ಮಕ್ಕಳ ಫಲಿತಾಂಶ ಸುಧಾರಣೆಗಾಗಿ ಈ ಕಾರ್ಯಾಗಾರ ಆಯೋಜಿಸಿದ್ದು ಶ್ಲಾಘನೀಯ.
>
> ■ **ಎಸ್.ವಿ. ಸಂಕನೂರ,** । ವಿಧಾನ ಪರಿಷತ್ ಸದಸ್ಯರು.

ಉಪಾಧ್ಯಕ್ಷ ಮಲ್ಲನಗೌಡ ಬಿರಾದಾರ, ಸಹಕಾರ್ಯದರ್ಶಿ ದೇವರಾಜೆಗೌಡ, ಸಂಘಟನಾ ಕಾರ್ಯದರ್ಶಿ ತುಕಾರಾಮ ಬಾಗೆನ್ನವರ, ಖಜಾಂಚಿ ಧನಸಿಂಗ ರಾಠೋಡ, ರಾಜ್ಯ ಉಪಾಧ್ಯಕ್ಷ ಸುರೇಶ ಕಲ್ಲನಿ, ಜಿಲ್ಲಾ ಕಾರ್ಯದರ್ಶಿ ರಾಕೇಶ ಜಿಗಳಿ, ಮಾಧ್ಯಮಿಕ ಶಾಲಾ ನೌಕರರ ಸಂಘದ ಅಧ್ಯಕ್ಷ ಎಚ್.ಪಿ.ಬಣಕಾರ, ಕಾರ್ಯದರ್ಶಿ ಎನ್.ಎನ್.ಕುಂದೂರು, ಪ್ರಾಥಮಿಕ ಶಾಲಾ ಶಿಕ್ಷಕ ಸಂಘದ ಕಾರ್ಯದರ್ಶಿ ಬಿ.ಎಸ್.ಚಳ್ಳಾಳ ಇತರರು ಇದ್ದರು. ಎ.ಬಿ ಗುಡ್ಡಳ್ಳಿ ಪ್ರಾರ್ಥಿಸಿದರು. ಬಸವರಾಜ ಜವಾಯಿ ಹಾಗೂ ಗೀತಾ ಸುತ್ತಕೋಟಿ, ಶಂಕರ ಹಾರ್ನಳ್ಳಿ ನಿರೂಪಿದರು. ಎಸ್.ಸಿ.ಕಲ್ಲನಿ ಸ್ವಾಗತಿಸಿದರು. ಮಲ್ಲಯ್ಯ ಹಿರೇಮಠ ವಂದಿಸಿದರು. ಇದಕ್ಕೂ ಮುನ್ನ ನಗರದ ಪ್ರಮುಖ ಬೀದಿಗಳಲ್ಲಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಹಾಗೂ ಮಹಾತ್ಮಾ ಗಾಂಧೀಜೀಯವರ ಭಾವಚಿತ್ರ ಮೆರವಣಿಗೆ ವಿವಿಧ ವಾದ್ಯಗಳೊಂದಿಗೆ ಅದ್ದೂರಿಯಾಗಿ ಜರುಗಿತು.

# ಶಿಕ್ಷಕರು ಸಂಘಟಿತರಾದಲ್ಲಿ ಸಮಸ್ಯೆಗೆ ಪರಿಹಾರ ಸಾಧ್ಯ

## ಹಾವೇರಿಯಲ್ಲಿ ಜಿಲ್ಲಾ ಮಟ್ಟದ ಪ್ರೌಢಶಾಲಾ ಸಹ-ಶಿಕ್ಷಕರ ಶೈಕ್ಷಣಿಕ ಸಮ್ಮೇಳನ



ಹಾವೇರಿ ಜಿಲ್ಲಾ ಗುರುಭವನದಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಪ್ರೌಢಶಾಲಾ ಸಹ-ಶಿಕ್ಷಕರ ಶೈಕ್ಷಣಿಕ ಸಮ್ಮೇಳನ ಉದ್ಘಾಟಿಸಲಾಯಿತು.

- ಸಹ ಶಿಕ್ಷಕರಿಗೆ ಇಲಾಖೆಯಿಂದ ಸಿಗಬೇಕಾಗಿರುವ ಎಲ್ಲ ಸೌಲಭ್ಯಗಳನ್ನು ಕೊಡಿಸುವ ಮತ್ತು ಅವರ ಬೋಧನಾ ಶೈಲಿಯಲ್ಲಿ ಉತ್ಸಾಹ ತುಂಬುವ ಜವಾಬ್ದಾರಿ ನಮ್ಮ ಸಂಘಟನೆ ಮೇಲಿದೆ.
- ಏಳನೇ ವೇತನ ಆಯೋಗದ ಜಾರಿ ಮತ್ತು ಸರ್ಕಾರಿ ನೌಕರರಿಗೆ ಹಳೆಯ ಪಿಂಚಣಿ ವ್ಯವಸ್ಥೆ ಮರುಜಾರಿ, ಪದವಿ ಪೂರ್ವ ಕಾಲೇಜಿಗೆ ಬಡ್ತಿ ನೀಡುವುದು, ಹೊಸ ಪ್ರೌಢಶಾಲೆಗಳಿಗೆ ಮತ್ತು ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗಕ್ಕೆ ಮುಖ್ಯೋಪಾಧ್ಯಾಯರ ಹುದ್ದೆ ಮಂಜೂರು ಮಾಡುವುದು ಮತ್ತಿತರ ಬೇಡಿಕೆಗೆ ಹೋರಾಡೋಣ.

• **ಕನ್ನಡಪ್ರಭ ವಾರ್ತೆ** ಹಾವೇರಿ

ರಾಷ್ಟ್ರದ ಭವಿಷ್ಯವನ್ನು ನಿರ್ಮಿಸುವ ಶಿಕ್ಷಕರು ಆಧುನಿಕ ಶೈಕ್ಷಣಿಕ ವ್ಯವಸ್ಥೆಯಲ್ಲಿ ಅನೇಕ ಸವಾಲುಗಳನ್ನು ಎದುರಿಸುತ್ತಿದ್ದಾರೆ. ಸಂಘಟಿತರಾದಲ್ಲಿ ಮಾತ್ರ ಅವುಗಳಿಗೆ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗುತ್ತದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ನಗರದ ಜಿಲ್ಲಾ ಗುರುಭವನದಲ್ಲಿ ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ-ಶಿಕ್ಷಕರ ಸಂಘದ ಜಿಲ್ಲಾ ಘಟಕದ ಆಶ್ರಯದಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಪ್ರೌಢಶಾಲಾ ಸಹ-ಶಿಕ್ಷಕರ ಶೈಕ್ಷಣಿಕ ಸಮ್ಮೇಳನ, ಸರ್ವೋದಯ ದಿನಾಚರಣೆ ಹಾಗೂ ಎಸ್ಸೆಸ್ಸೆಲ್ಸಿ ಫಲಿತಾಂಶ ಸುಧಾರಣೆಯ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಯಾರೇ ಆಗಲಿ ತಮ್ಮ ಹಕ್ಕುಗಳನ್ನು ಕೇಳುವಾಗ ಒಬ್ಬಂಟಿಯಾಗಿ ಹೋದರೆ ಜಯ ಸಿಗುವುದಿಲ್ಲ. ಸಂಘಟಿತರಾಗಿ ಸಂಘಟನೆ ಮೂಲಕವಾಗಿ ತಮ್ಮ ಹಕ್ಕುಗಳನ್ನು ನ್ಯಾಯಯುತವಾಗಿ ಕೇಳಿದಾಗ ಜಯ ಸಿಗುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಶಾಂತಗಿರಿ ಮಾತನಾಡಿ, ಸಹ ಶಿಕ್ಷಕರಿಗೆ ಇಲಾಖೆಯಿಂದ ಸಿಗಬೇಕಾಗಿರುವ ಎಲ್ಲ ಸೌಲಭ್ಯಗಳನ್ನು ಕೊಡಿಸುವ ಮತ್ತು ಅವರ ಬೋಧನಾ ಶೈಲಿಯಲ್ಲಿ ಉತ್ಸಾಹ ತುಂಬುವ ಜವಾಬ್ದಾರಿ ನಮ್ಮ ಸಂಘಟನೆ ಮೇಲಿದೆ. ಏಳನೇ ವೇತನ ಆಯೋಗದ ಜಾರಿ ಮತ್ತು ಸರ್ಕಾರಿ ನೌಕರರಿಗೆ ಹಳೆಯ ಪಿಂಚಣಿ ವ್ಯವಸ್ಥೆ ಮರುಜಾರಿ, ಪದವಿ ಪೂರ್ವ ಕಾಲೇಜಿಗೆ ಬಡ್ತಿ ನೀಡುವುದು, ಹೊಸ ಪ್ರೌಢಶಾಲೆಗಳಿಗೆ ಮತ್ತು ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗಕ್ಕೆ ಮುಖ್ಯೋಪಾಧ್ಯಾಯರ ಹುದ್ದೆ ಮಂಜೂರು ಮಾಡುವುದು ಇನ್ನೂ ಮುಂತಾದ ಅನೇಕ ಬೇಡಿಕೆಗಳೊಂದಿಗೆ ಸರ್ಕಾರಕ್ಕೆ ಮನವಿ ಸಲ್ಲಿಸಿ ಹೋರಾಟ ಮಾಡೋಣ ಎಂದು ಕರೆ ನೀಡಿದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಶಾಲೆ ಎಂಬ 4 ಗೋಡೆಗಳ ಮಧ್ಯದಲ್ಲಿ ದೇಶದ ಭವಿಷ್ಯವನ್ನು ನಿರ್ಮಿಸುವ ಕೆಲಸವನ್ನು ಶಿಕ್ಷಕರು ಮಾಡುತ್ತಿದ್ದು, ಅವರ ಸೇವೆ ಸದಾ ಸ್ಮರಣೀಯ. ವಿಶೇಷವಾಗಿ ಎಸ್ಸೆಸ್ಸೆಲ್ಸಿ ಮಕ್ಕಳ ಫಲಿತಾಂಶ ಸುಧಾರಣೆಗಾಗಿ ಈ ಕಾರ್ಯಾಗಾರ ಆಯೋಜಿಸಿದ್ದು ಶ್ಲಾಘನೀಯ ಎಂದರು.

ಕಾರ್ಯಕ್ರಮದಲ್ಲಿ ಧಾರವಾಡದ ಹಿರೇಮಲ್ಲೂರು ಈಶ್ವರನ್ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಶಶಿಧರ ತೋಡ್ಕರ ಉಪನ್ಯಾಸ ನೀಡಿದರು.

ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ ಸತೀಶ ಕುಲಕರ್ಣಿ ಹಾಗೂ ಡಾ. ಶಂಭು ಬಳಿಗಾರ ಅವರನ್ನು ಸನ್ಮಾನಿಸಲಾಯಿತು. ಬಡ್ತಿ ಮುಖ್ಯೋಪಾಧ್ಯಯರನ್ನು, ಸಂಘಟನೆಯ ಪದಾಧಿಕಾರಿಗಳನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಡಿಡಿಪಿಐ ಸುರೇಶ ಹುಗ್ಗಿ, ಡಯಟ್ ಪ್ರಾಚಾರ್ಯ ಗಿರೀಶ ಪದಕಿ, ಜಿಲ್ಲೆಯ ವಿವಿಧ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಮೌನೇಶ ಬಡಿಗೇರ, ಎಂ.ಎಚ್. ಪಾಟೀಲ, ಶ್ರೀಧರ, ಎಸ್.ಜಿ. ಕೋಟಿ, ಎಂ.ಎಫ್. ಬಾರ್ಕಿ, ನಿರಂಜನ ಮೂರ್ತಿ, ವಿಷಯ ಪರೀವೀಕ್ಷಕರು, ಪ್ರೌಢಶಾಲಾ ಸಹಶಿಕ್ಷಕರ ಸಂಘದ ರಾಜ್ಯಾಧ್ಯಕ್ಷ ಸಿದ್ದಬಸಪ್ಪ ಬಿ., ಗೌರವಾಧ್ಯಕ್ಷ ಎಚ್.ಕೆ. ಮಂಜುನಾಥ, ಪ್ರಧಾನ ಕಾರ್ಯದರ್ಶಿ ರಾಮು ಗುಗವಾಡ, ಉಪಾಧ್ಯಕ್ಷ ಮಲ್ಲನಗೌಡ ಬಿರಾದಾರ, ಸಹಕಾರ್ಯದರ್ಶಿ ದೇವರಾಜೆಗೌಡ, ಸಂಘಟನಾ ಕಾರ್ಯದರ್ಶಿ ತುಕಾರಾಮ ಬಾಗೇನ್ನವರ, ಖಜಾಂಚಿ ಧನಸಿಂಗ ರಾಠೋಡ, ರಾಜ್ಯ ಉಪಾಧ್ಯಕ್ಷ ಸುರೇಶ ಕಲ್ಲನಿ, ಜಿಲ್ಲಾ ಕಾರ್ಯದರ್ಶಿ ರಾಕೇಶ ಜಗಳಿ, ಮಾಧ್ಯಮಿಕ ಶಾಲಾ ನೌಕರರ ಸಂಘದ ಅಧ್ಯಕ್ಷ ಎಚ್.ಪಿ. ಬಣಕಾರ, ಕಾರ್ಯದರ್ಶಿ ಎಸ್.ಎನ್. ಕುಂದೂರು, ಪ್ರಾಥಮಿಕ ಶಾಲಾ ಶಿಕ್ಷಕ ಸಂಘದ ಕಾರ್ಯದರ್ಶಿ ಬಿ.ಎಸ್. ಚಳ್ಳಾಳ ಇತರರು ಇದ್ದರು.

ಎ.ಬಿ. ಗುಡ್ಡಳ್ಳಿ ಪ್ರಾರ್ಥಿಸಿದರು. ಬಸವರಾಜ ಜವಾಯಿ ಹಾಗೂ ಗೀತಾ ಸುತ್ತಕೋಟಿ, ಶಂಕರ ಹರಳ್ಳಿ ನಿರೂಪಿಸಿದರು. ಎಸ್.ಸಿ. ಕಲ್ಲನಿ ಸ್ವಾಗತಿಸಿದರು. ಮಲ್ಲಯ್ಯ ಹಿರೇಮಠ ವಂದಿಸಿದರು.

ಇದಕ್ಕೂ ಮುನ್ನ ನಗರದ ಪ್ರಮುಖ ಬೀದಿಗಳಲ್ಲಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಹಾಗೂ ಮಹಾತ್ಮಾ ಗಾಂಧೀಜಿಯವರ ಭಾವಚಿತ್ರ ಮೆರವಣಿಗೆ ವಿವಿಧ ವಾದ್ಯಗಳೊಂದಿಗೆ ಅದ್ದೂರಿಯಾಗಿ ಜರುಗಿತು.

## ಜಿಲ್ಲಾಮಟ್ಟದ ಪ್ರೌಢಶಾಲಾ ಸಹಶಿಕ್ಷಕರ ಶೈಕ್ಷಣಿಕ ಸಮ್ಮೇಳನ: ಬಸವರಾಜ ಹೊರಟ್ಟಿ ಅಭಿಮತ

# ಸಮಸ್ಯೆಗಳ ನಿವಾರಣೆಗೆ ಸಂಘಟನೆ ಅವಶ್ಯ

ಪ್ರಜಾವಾಣಿ ವಾರ್ತೆ

ಹಾವೇರಿ: 'ಯಾರೇ ಆಗಲಿ ತಮ್ಮ ಹಕ್ಕುಗಳನ್ನು ಕೇಳುವಾಗ ಒಬ್ಬಂಟಿಯಾಗಿ ಹೋದರೆ ಜಯ ಸಿಗುವುದಿಲ್ಲ. ಸಂಘಟಿತರಾಗಿ ಸಂಘಟನೆ ಮೂಲಕವಾಗಿ ತಮ್ಮ ಹಕ್ಕುಗಳನ್ನು ನ್ಯಾಯಯುತವಾಗಿ ಕೇಳಿದಾಗ ಜಯ ಸಿಗುತ್ತದೆ' ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ನುಡಿದರು.

ನಗರದ ಜಿಲ್ಲಾ ಗುರುಭವನದಲ್ಲಿ ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ-ಶಿಕ್ಷಕರ ಸಂಘದ ಜಿಲ್ಲಾ ಘಟಕದ ಆಶ್ರಯದಲ್ಲಿ ಬುಧವಾರ ಆಯೋಜಿಸಿದ್ದ ಜಿಲ್ಲಾಮಟ್ಟದ ಪ್ರೌಢಶಾಲಾ ಸಹ-ಶಿಕ್ಷಕರ ಶೈಕ್ಷಣಿಕ ಸಮ್ಮೇಳನ, ಸರ್ವೋದಯ ದಿನಾಚರಣೆ ಹಾಗೂ ಎಸ್.ಎಸ್.ಎಲ್.ಸಿ ಫಲಿತಾಂಶ ಸುಧಾರಣೆಯ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ರಾಷ್ಟ್ರದ ಭವಿಷ್ಯವನ್ನು ನಿರ್ಮಿಸುವ ಶಿಕ್ಷಕರು ಆಧುನಿಕ ಶೈಕ್ಷಣಿಕ ವ್ಯವಸ್ಥೆಯಲ್ಲಿ ಅನೇಕ ಸವಾಲುಗಳನ್ನು ಎದುರಿಸುತ್ತಿದ್ದಾರೆ. ಅವುಗಳಿಗೆ ಪರಿಹಾರ ಕಂಡುಕೊಳ್ಳಲು ಈ ರೀತಿ ಸಂಘಟಿತರಾಗಿ ಶೈಕ್ಷಣಿಕ ಪ್ರಗತಿ ಮತ್ತು ಇಲಾಖೆಯ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗುತ್ತದೆ ಎಂದು ನುಡಿದರು.

**ಕ್ಯಾಲೆಂಡರ್ ಬಿಡುಗಡೆ:**

ವಿಧಾನ ಪರಿಷತ್ ಸದಸ್ಯ ಎಸ್.ವಿ.ಸಂಕನೂರ ಅವರು ಸಹಶಿಕ್ಷಕರ ಸಂಘದ ಕ್ಯಾಲೆಂಡರ್ ಬಿಡುಗಡೆ ಮಾಡಿ ಮಾತನಾಡಿ, ಶಾಲೆ ಎಂಬ ನಾಲ್ಕು ಗೋಡೆಗಳ ಮಧ್ಯದಲ್ಲಿ ದೇಶದ ಭವಿಷ್ಯ ನಿರ್ಮಿಸುವ ಕೆಲಸವನ್ನು ಶಿಕ್ಷಕರು ಮಾಡುತ್ತಿದ್ದು, ಅವರ ಸೇವೆ ಸದಾ ಸ್ಮರಣೀಯ. ವಿಶೇಷವಾಗಿ ಎಸ್.ಎಸ್.ಎಲ್.ಸಿ ಮಕ್ಕಳ ಫಲಿತಾಂಶ ಸುಧಾರಣೆಗಾಗಿ ಈ ಕಾರ್ಯಾಗಾರ ಅತ್ಯಂತ ಅವಶ್ಯ ಎಂದು ನುಡಿದರು.



ಹಾವೇರಿ ನಗರದ ಜಿಲ್ಲಾ ಗುರುಭವನದಲ್ಲಿ ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹಶಿಕ್ಷಕರ ಸಂಘದ ಜಿಲ್ಲಾ ಘಟಕದ ಆಶ್ರಯದಲ್ಲಿ ಆಯೋಜಿಸಿದ್ದ ಜಿಲ್ಲಾಮಟ್ಟದ ಪ್ರೌಢಶಾಲಾ ಸಹಶಿಕ್ಷಕರ ಶೈಕ್ಷಣಿಕ ಸಮ್ಮೇಳನವನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಉದ್ಘಾಟಿಸಿದರು

ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹಶಿಕ್ಷಕರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಮಲ್ಲಿಕಾರ್ಜುನ ಶಾಂತಗಿರಿ ಮಾತನಾಡಿ, ಸಹ ಶಿಕ್ಷಕರಿಗೆ ಇಲಾಖೆಯಿಂದ ಸಿಗಬೇಕಾಗಿರುವ ಎಲ್ಲ ಸೌಲಭ್ಯಗಳನ್ನು ಕೊಡಿಸುವ ಮತ್ತು ಅವರ ಬೋಧನಾ ಶೈಲಿಯಲ್ಲಿ ಉತ್ಸಾಹ ತುಂಬುವ ಜವಾಬ್ದಾರಿ ನಮ್ಮ ಸಂಘಟನೆ ಮೇಲಿದೆ ಎಂದರು.

ಏಳನೇ ವೇತನ ಆಯೋಗದ ಜಾರಿ ಮತ್ತು ಸರ್ಕಾರಿ ನೌಕರರಿಗೆ ಹಳೆಯ ಪಿಂಚಣಿ ವ್ಯವಸ್ಥೆ ಮರುಜಾರಿ, ಪದವಿ ಪೂರ್ವ ಕಾಲೇಜಿಗೆ ಭಡ್ತಿ ನೀಡುವುದು, ಹೊಸ ಪ್ರೌಢಶಾಲೆಗಳಿಗೆ ಮತ್ತು ಪ.ಪೂ. ಕಾಲೇಜಿನ ಪ್ರೌಢಶಾಲಾ ವಿಭಾಗಕ್ಕೆ ಮುಖ್ಯಶಿಕ್ಷಕರ ಹುದ್ದೆ ಮಂಜೂರು ಮಾಡುವುದು ಇನ್ನೂ ಮುಂತಾದ ಅನೇಕ ನಮ್ಮ ಬೇಡಿಕೆಗಳೊಂದಿಗೆ ಸರ್ಕಾರಕ್ಕೆ ಮನವಿ ಸಲ್ಲಿಸಿ ಹೋರಾಟ ಮಾಡೋಣ ಎಂದು ನುಡಿದರು.

ಉಪ ನಿರ್ದೇಶಕರಾದ ಸುರೇಶ ಹುಗ್ಗಿ, ಡಯಟ್ ಪ್ರಾಚಾರ್ಯರಾದ ಗಿರೀಶ ಪದಕಿ, ಜಿಲ್ಲೆಯ ವಿವಿಧ ತಾಲ್ಲೂಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಮೌನೇಶ ಬಡಿಗೇರ, ಎಂ.ಎಚ್. ಪಾಟೀಲ, ಶ್ರೀಧರ, ಎಸ್.ಜಿ.ಕೋಟಿ, ಎಂ.ಎಫ್ ಬಾರ್ಕಿ, ನಿರಂಜನ ಮೂರ್ತಿ, ವಿಷಯ ಪರೀವಿಕ್ಷಕರು, ಪ್ರೌಢಶಾಲಾ ಸಹಶಿಕ್ಷಕರ ಸಂಘದ ರಾಜ್ಯ ಘಟಕದ ಅಧ್ಯಕ್ಷ ಸಿದ್ಧಬಸಪ್ಪ ಬಿ, ಗೌರವಾಧ್ಯಕ್ಷ ಎಚ್.ಕೆ ಮಂಜುನಾಥ ಪ್ರದಾನಿ ಕಾರ್ಯದರ್ಶಿ ರಾಮು ಗುಗವಾಡ ಉಪಾಧ್ಯಕ್ಷ ಮಲ್ಲನಗೌಡ ಬಿರಾದಾರ ಸಹಕಾರ್ಯದರ್ಶಿ ದೇವರಾಜೆಗೌಡ ಸಂಘಟನಾ ಕಾರ್ಯದರ್ಶಿ ತುಕಾರಾಮ ಬಾಗೆನ್ನವರ, ಖಜಾಂಚಿ ಧನಸಿಂಗ ರಾಠೋಡ ಇದ್ದರು.

ಬಸವರಾಜ ಜವಾಯಿ ಹಾಗೂ ಗೀತಾ ಸುತ್ತಕೋಟಿ, ಶಂಕರ ಹಾರ್ನಳ್ಳಿ ನಿರೂಪಿದರು. ಎಸ್.ಸಿ.ಕಲ್ಮನಿ ಸ್ವಾಗತಿಸಿದರು. ಎ.ಬಿ ಗುಡ್ಡಳ್ಳಿ ಪ್ರಾರ್ಥಿಸಿದರು. ಮಲ್ಲಯ್ಯ ಹಿರೇಮಠ ವಂದಿಸಿದರು.

### ಸಾಧಕರಿಗೆ ಸನ್ಮಾನ

ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ ಸತೀಶ ಕುಲಕರ್ಣಿ ಹಾಗೂ ಶಂಭು ಬಳಿಗಾರ ಅವರನ್ನು ಸನ್ಮಾನಿಸಲಾಯಿತು. ಬಡ್ತಿ ಪಡೆದ ಮುಖ್ಯಶಿಕ್ಷಕರನ್ನು ಸಂಘಟನೆಯ ಪದಾಧಿಕಾರಿಗಳನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಧಾರವಾಡದ ಹಿರೇಮಲ್ಲೂರು ಈಶ್ವರನ್ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರದ ಶಶಿಧರ ತೋಡ್ಕರ ಅವರು ಉಪನ್ಯಾಸ ನೀಡಿದರು. ಸರ್ವಪಲ್ಲಿ ರಾಧಾಕೃಷ್ಣನ್ ಹಾಗೂ ಮಹಾತ್ಮಾ ಗಾಂಧೀಜಿಯವರ ಭಾವಚಿತ್ರ ಮೆರವಣಿಗೆ ವಿವಿಧ ವಾದ್ಯಗಳೊಂದಿಗೆ ನಗರದ ಪ್ರಮುಖ ಬೀದಿಗಳಲ್ಲಿ ಅದ್ದೂರಿಯಾಗಿ ಜರುಗಿತು.

# ಶಿಕ್ಷಕರು ಸಂಘಟಿತರಾದಲ್ಲಿ ಸಮಸ್ಯೆಗೆ ಪರಿಹಾರ ಸಾಧ್ಯ

## ಹಾವೇರಿಯಲ್ಲಿ ಜಿಲ್ಲಾ ಮಟ್ಟದ ಪ್ರೌಢಶಾಲಾ ಸಹ-ಶಿಕ್ಷಕರ ಶೈಕ್ಷಣಿಕ ಸಮ್ಮೇಳನ


KP

ಹಾವೇರಿ ಜಿಲ್ಲಾ ಗುರುಭವನದಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಪ್ರೌಢಶಾಲಾ ಸಹ-ಶಿಕ್ಷಕರ ಶೈಕ್ಷಣಿಕ ಸಮ್ಮೇಳನ ಉದ್ಘಾಟಿಸಲಾಯಿತು.

- ಸಹ ಶಿಕ್ಷಕರಿಗೆ ಇಲಾಖೆಯಿಂದ ಸಿಗಬೇಕಾಗಿರುವ ಎಲ್ಲ ಸೌಲಭ್ಯಗಳನ್ನು ಕೊಡಿಸುವ ಮತ್ತು ಅವರ ಬೋಧನಾ ಶೈಲಿಯಲ್ಲಿ ಉತ್ಸಾಹ ತುಂಬುವ ಜವಾಬ್ದಾರಿ ನಮ್ಮ ಸಂಘಟನೆ ಮೇಲಿದೆ.
- ಏಳನೇ ವೇತನ ಆಯೋಗದ ಜಾರಿ ಮತ್ತು ಸರ್ಕಾರಿ ನೌಕರರಿಗೆ ಹಳೆಯ ಪಿಂಚಣಿ ವ್ಯವಸ್ಥೆ ಮರುಜಾರಿ, ಪದವಿ ಪೂರ್ವ ಕಾಲೇಜಿಗೆ ಬಡ್ತಿ ನೀಡುವುದು, ಹೊಸ ಪ್ರೌಢಶಾಲೆಗಳಿಗೆ ಮತ್ತು ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗಕ್ಕೆ ಮುಖ್ಯೋಪಾಧ್ಯಾಯರ ಹುದ್ದೆ ಮಂಜೂರು ಮಾಡುವುದು ಮತ್ತಿತರ ಬೇಡಿಕೆಗೆ ಹೋರಾಡೋಣ.

• **ಕನ್ನಡಪ್ರಭ ವಾರ್ತೆ** ಹಾವೇರಿ

ರಾಷ್ಟ್ರದ ಭವಿಷ್ಯವನ್ನು ನಿರ್ಮಿಸುವ ಶಿಕ್ಷಕರು ಆಧುನಿಕ ಶೈಕ್ಷಣಿಕ ವ್ಯವಸ್ಥೆಯಲ್ಲಿ ಅನೇಕ ಸವಾಲುಗಳನ್ನು ಎದುರಿಸುತ್ತಿದ್ದಾರೆ. ಸಂಘಟಿತರಾದಲ್ಲಿ ಮಾತ್ರ ಅವುಗಳಿಗೆ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗುತ್ತದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ನಗರದ ಜಿಲ್ಲಾ ಗುರುಭವನದಲ್ಲಿ ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹ-ಶಿಕ್ಷಕರ ಸಂಘದ ಜಿಲ್ಲಾ ಘಟಕದ ಆಶ್ರಯದಲ್ಲಿ ಆಯೋಜಿಸಿದ್ದ ಜಿಲ್ಲಾ ಮಟ್ಟದ ಪ್ರೌಢಶಾಲಾ ಸಹ-ಶಿಕ್ಷಕರ ಶೈಕ್ಷಣಿಕ ಸಮ್ಮೇಳನ, ಸರ್ವೋದಯ ದಿನಾಚರಣೆ ಹಾಗೂ ಎಸ್ಸೆಸ್ಸೆಲ್ಸಿ ಫಲಿತಾಂಶ ಸುಧಾರಣೆಯ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಯಾರೇ ಆಗಲಿ ತಮ್ಮ ಹಕ್ಕುಗಳನ್ನು ಕೇಳುವಾಗ ಒಬ್ಬಂಟಿಯಾಗಿ ಹೋದರೆ ಜಯ ಸಿಗುವುದಿಲ್ಲ. ಸಂಘಟಿತರಾಗಿ ಸಂಘಟನೆ ಮೂಲಕವಾಗಿ ತಮ್ಮ ಹಕ್ಕುಗಳನ್ನು ನ್ಯಾಯಯುತವಾಗಿ ಕೇಳಿದಾಗ ಜಯ ಸಿಗುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಶಾಂತಗಿರಿ ಮಾತನಾಡಿ, ಸಹ ಶಿಕ್ಷಕರಿಗೆ ಇಲಾಖೆಯಿಂದ ಸಿಗಬೇಕಾಗಿರುವ ಎಲ್ಲ ಸೌಲಭ್ಯಗಳನ್ನು ಕೊಡಿಸುವ ಮತ್ತು ಅವರ ಬೋಧನಾ ಶೈಲಿಯಲ್ಲಿ ಉತ್ಸಾಹ ತುಂಬುವ ಜವಾಬ್ದಾರಿ ನಮ್ಮ ಸಂಘಟನೆ ಮೇಲಿದೆ. ಏಳನೇ ವೇತನ ಆಯೋಗದ ಜಾರಿ ಮತ್ತು ಸರ್ಕಾರಿ ನೌಕರರಿಗೆ ಹಳೆಯ ಪಿಂಚಣಿ ವ್ಯವಸ್ಥೆ ಮರುಜಾರಿ, ಪದವಿ ಪೂರ್ವ ಕಾಲೇಜಿಗೆ ಬಡ್ತಿ ನೀಡುವುದು, ಹೊಸ ಪ್ರೌಢಶಾಲೆಗಳಿಗೆ ಮತ್ತು ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗಕ್ಕೆ ಮುಖ್ಯೋಪಾಧ್ಯಾಯರ ಹುದ್ದೆ ಮಂಜೂರು ಮಾಡುವುದು ಇನ್ನೂ ಮುಂತಾದ ಅನೇಕ ಬೇಡಿಕೆಗಳೊಂದಿಗೆ ಸರ್ಕಾರಕ್ಕೆ ಮನವಿ ಸಲ್ಲಿಸಿ ಹೋರಾಟ ಮಾಡೋಣ ಎಂದು ಕರೆ ನೀಡಿದರು.

ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಶಾಲೆ ಎಂಬ 4 ಗೋಡೆಗಳ ಮಧ್ಯದಲ್ಲಿ ದೇಶದ ಭವಿಷ್ಯವನ್ನು ನಿರ್ಮಿಸುವ ಕೆಲಸವನ್ನು ಶಿಕ್ಷಕರು ಮಾಡುತ್ತಿದ್ದು, ಅವರ ಸೇವೆ ಸದಾ ಸ್ಮರಣೀಯ. ವಿಶೇಷವಾಗಿ ಎಸ್ಸೆಸ್ಸೆಲ್ಸಿ ಮಕ್ಕಳ ಫಲಿತಾಂಶ ಸುಧಾರಣೆಗಾಗಿ ಈ ಕಾರ್ಯಾಗಾರ ಆಯೋಜಿಸಿದ್ದು ಶ್ಲಾಘನೀಯ ಎಂದರು.

ಕಾರ್ಯಕ್ರಮದಲ್ಲಿ ಧಾರವಾಡದ ಹಿರೇಮಲ್ಲೂರು ಈಶ್ವರನ್ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಶಶಿಧರ ತೋಡ್ಕರ ಉಪನ್ಯಾಸ ನೀಡಿದರು.

ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ ಸತೀಶ ಕುಲಕರ್ಣಿ ಹಾಗೂ ಡಾ. ಶಂಭು ಬಳಿಗಾರ ಅವರನ್ನು ಸನ್ಮಾನಿಸಲಾಯಿತು. ಬಡ್ತಿ ಮುಖ್ಯೋಪಾಧ್ಯಯರನ್ನು, ಸಂಘಟನೆಯ ಪದಾಧಿಕಾರಿಗಳನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಡಿಡಿಪಿಐ ಸುರೇಶ ಹುಗ್ಗಿ, ಡಯಟ್ ಪ್ರಾಚಾರ್ಯ ಗಿರೀಶ ಪದಕಿ, ಜಿಲ್ಲೆಯ ವಿವಿಧ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಮೌನೇಶ ಬಡಿಗೇರ, ಎಂ.ಎಚ್. ಪಾಟೀಲ, ಶ್ರೀಧರ, ಎಸ್.ಜಿ. ಕೋಟಿ, ಎಂ.ಎಫ್. ಬಾರ್ಕಿ, ನಿರಂಜನ ಮೂರ್ತಿ, ವಿಷಯ ಪರೀವೀಕ್ಷಕರು, ಪ್ರೌಢಶಾಲಾ ಸಹಶಿಕ್ಷಕರ ಸಂಘದ ರಾಜ್ಯಾಧ್ಯಕ್ಷ ಸಿದ್ದಬಸಪ್ಪ ಬಿ., ಗೌರವಾಧ್ಯಕ್ಷ ಎಚ್.ಕೆ. ಮಂಜುನಾಥ, ಪ್ರಧಾನ ಕಾರ್ಯದರ್ಶಿ ರಾಮು ಗುಗವಾಡ, ಉಪಾಧ್ಯಕ್ಷ ಮಲ್ಲನಗೌಡ ಬಿರಾದಾರ, ಸಹಕಾರ್ಯದರ್ಶಿ ದೇವರಾಜೇಗೌಡ, ಸಂಘಟನಾ ಕಾರ್ಯದರ್ಶಿ ತುಕಾರಾಮ ಬಾಗೇನ್ನವರ, ಖಜಾಂಚಿ ಧನಸಿಂಗ ರಾಠೋಡ, ರಾಜ್ಯ ಉಪಾಧ್ಯಕ್ಷ ಸುರೇಶ ಕಲ್ಲನಿ, ಜಿಲ್ಲಾ ಕಾರ್ಯದರ್ಶಿ ರಾಕೇಶ ಜಿಗಳಿ, ಮಾಧ್ಯಮಿಕ ಶಾಲಾ ನೌಕರರ ಸಂಘದ ಅಧ್ಯಕ್ಷ ಎಚ್.ಪಿ. ಬಣಕಾರ, ಕಾರ್ಯದರ್ಶಿ ಎನ್.ಎನ್. ಕುಂದೂರು, ಪ್ರಾಥಮಿಕ ಶಾಲಾ ಶಿಕ್ಷಕ ಸಂಘದ ಕಾರ್ಯದರ್ಶಿ ಬಿ.ಎಸ್. ಚಳ್ಳಾಳ ಇತರರು ಇದ್ದರು.

ಎ.ಬಿ. ಗುಡ್ಡಳ್ಳಿ ಪ್ರಾರ್ಥಿಸಿದರು. ಬಸವರಾಜ ಜವಾಯಿ ಹಾಗೂ ಗೀತಾ ಸುತ್ತಕೋಟಿ, ಶಂಕರ ಹರಳ್ಳಿ ನಿರೂಪಿದರು. ಎಸ್.ಸಿ. ಕಲ್ಲನಿ ಸ್ವಾಗತಿಸಿದರು. ಮಲ್ಲಯ್ಯ ಹಿರೇಮಠ ವಂದಿಸಿದರು.

ಇದಕ್ಕೂ ಮುನ್ನ ನಗರದ ಪ್ರಮುಖ ಬೀದಿಗಳಲ್ಲಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಹಾಗೂ ಮಹಾತ್ಮಾ ಗಾಂಧೀಜಿಯವರ ಭಾವಚಿತ್ರ ಮೆರವಣಿಗೆ ವಿವಿಧ ವಾದ್ಯಗಳೊಂದಿಗೆ ಅದ್ದೂರಿಯಾಗಿ ಜರುಗಿತು.